12ನೇ ಆರ್ಥಿಕ ಆಯೋಗದಲ್ಲಿ ಲಭ್ಯವಾಗಲಿರುವ ಅನುದಾನ ಹಾಗೂ ರಾಷ್ಟ್ರೀಯ ವಿ-ಆಡಳಿತ ನಿಧಿಯಿಂದ ರಾಜ್ಯಕ್ಕೆ ಲಭ್ಯವಾಗಲಿರುವ ಹಣವನ್ನು ಸಹ ಉಪಯೋಗಿಸಿ ಕೊಳ್ಳಲಾಗುವುದು.

ಆದಾಗ್ಯೂ ಪ್ರಸ್ತಾವಿಕ ಕಾರ್ಯಕ್ರಮಗಳಿಗೆ ಹೆಚ್ಚಿನ ಕೇಂದ್ರ ಸಹಾಯಧನ ದೊರೆಯುವಂತೆ ಪ್ರಯತ್ನಿಸಲಾಗುವುದು.

136(353) ಶ್ರೀ ಬೋಪಯ್ಯ ಕೆ.ಜಿ. (ಮಡಿಕೇರಿ): ಮಾನ್ಯ ಅರಣ್ಯ ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೊಡಗು ಜಿಲ್ಲೆಯಲ್ಲಿ ಗ್ರಾಮದಿಂದ ಗ್ರಾಮಕ್ಕೆ ಹಾಲಿ ಇರುವ ಸಂಪರ್ಕ ರಸ್ತೆಗಳನ್ನು ಅಭಿವೃದ್ಧಿ ಮತ್ತು ದುರಸ್ತಿಪಡಿಸಲು ಅರಣ್ಯ ಇಲಾಖೆ ಅಡ್ಡಿಪಡಿಸುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಅದೇ ರೀತಿ ಗ್ರಾಮೀಣ ಪ್ರದೇಶಗಳಿಗೆ ವಿದ್ಯುತ್ ದೂರವಾಣಿ ಸಂಪರ್ಕ ಮತ್ತು ಕುಡಿಯುವ ನೀರಿಗಾಗಿ ಪೈಪ್ ಅಳವಡಿಸಲು ಅರಣ್ಯ ಇಲಾಖೆ ಅಡ್ಡಿಪಡಿಸುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರದ ನಿಲುವೇನು?

ಶ್ರೀ ಸಿ ಚನ್ನಿಗಪ್ಪ (ಅರಣ್ಯ ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು):

ಅ) ಕೊಡಗು ಜಿಲ್ಲೆಯ ಮಡಿಕೇರಿ ವಿಭಾಗದ ವ್ಯಾಪ್ತಿಯಲ್ಲಿಯ ಮೀಸಲು ಅರಣ್ಯದ ಮಧ್ಯದಲ್ಲಿ ಸಾರ್ವಜನಿಕರು ಓಡಾಡುವ ಸಲುವಾಗಿ ಅನಧಿಕೃತ ರಸ್ತೆಗಳು ಹಾಲಿ ಇರುತ್ತದೆ. ಈ ರಸ್ತೆಯನ್ನು ಉಪಯೋಗಿಸಲು ಇಲಾಖಾ ವತಿಯಿಂದ ಯಾವುದೇ ರೀತಿಯ ತೊಂದರೆ ಉಂಟು ಮಾಡುತ್ತಿಲ್ಲ. ಕೇಂದ್ರ ಸರ್ಕಾರದ ಮಾರ್ಗಸೂಚಿಯನ್ವಯ ಅರಣ್ಯ ಭೂಮಿಯಲ್ಲಿರುವ ರಸ್ತೆಯನ್ನು ಅಗಲೀಕರಣಗೊಳಿಸಲು ಹಾಗೂ ಇದಕ್ಕಾಗಿ ಮರಗಳನ್ನು ಕಡಿಯಲು ಕೇಂದ್ರ ಸರ್ಕಾರದ ಪೂರ್ವಾನುಮತಿಯು ಅವಶ್ಯಕವಾಗಿರುತ್ತದೆ. ಈ ಕಾರಣದಿಂದಾಗಿ ಈ ವಿಭಾಗದ ವ್ಯಾಪ್ತಿಯ ಸಂಪಾಜೆ ವಲಯದ ಬಾಲಂಬಿಯಿಂದ ದಬ್ಬಡಕ್ಕೆ ಹೋಗುವ ರಸ್ತೆಯ ಎರಡೂ ಬದಿ ಮರಗಳನ್ನು ಕಡಿದು ರಸ್ತೆ ಅಗಲೀಕರಿಸುತ್ತಿದ್ದಾಗ ಸ್ಥಳಕ್ಕೆ ಹೋಗಿ ಸದರಿ ಕೆಲಸವನ್ನು ಸ್ಥಗಿತಗೊಳಿಸಲಾಗಿರುತ್ತದೆ. ಈ ವಿಚಾರವು ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ಆ) ಇಂತಹ ಪ್ರಕರಣಗಳು ಇರುವುದಿಲ್ಲ.

ಇ) 1980ರ ಅರಣ್ಯ ಸಂರಕ್ಷಣಾ ಕಾಯಿದೆ ಅನುಸಾರ ಅರಣ್ಯ ಪ್ರದೇಶಗಳಲ್ಲಿ ಅರಣ್ಯೇತರ ಚಟುವಟಿಕೆಗೆ ಕೇಂದ್ರ ಸರ್ಕಾರದ ಪೂರ್ವಾನುಮತಿ ಅವಶ್ಯಕತೆ ಇರುತ್ತದೆ. ಆದರೆ ದಿನಾಂಕ: 3-1-2005ರ ಕೇಂದ್ರ ಸರ್ಕಾರದ ಮಾರ್ಗಸೂಚಿಯನ್ವಯ 1 ಹೆಕ್ಟೇರ್‌ಗಿಂತ ಕಡಿಮೆ ಇರುವ ಅರಣ್ಯ ಪ್ರದೇಶವನ್ನು ಕೆಳಕಂಡ ಅರಣ್ಯೇತರ ಉದ್ದೇಶಕ್ಕಾಗಿ ಕೆಲವು ಷರತ್ತುಗಳಿಗೊಳಪಟ್ಟು ಸರ್ಕಾರದ ಇಲಾಖೆಗಳಿಗೆ ನೀಡಲು ರಾಜ್ಯ ಸರ್ಕಾರಕ್ಕೆ ಅಧಿಕಾರವಿರುತ್ತದೆ.

1) ಶಾಲೆಗಳು

2) ಚಿಕಿತ್ಸಾಲಯ/ಆಸ್ಪತ್ರೆ

3) ವಿದ್ಯುತ್ ಮತ್ತು ಟೆಲಿಕಮ್ಯುನಿಕೇಷನ್ ಲೈನ್‌ಗಳು.

4) ಕುಡಿಯುವ ನೀರು

5) ನೀರು/ಮಳೆನೀರಿನ ಶೇಖರಣೆ ಸೌಲಭ್ಯ

6) ಸಣ್ಣ ನೀರಾವರಿ ಕಾಲುವೆ

7) ಸಾಂಪ್ರದಯಕವಲ್ಲದ ಇಂಧನದ ಮೂಲಗಳು

8) ಕೌಶಲದ(ನೈಪುಣ್ಯತೆ) ಉನ್ನತೀಕರಣ/ವೃತ್ತಿ ತರಬೇತಿ ಕೇಂದ್ರ

9) ಪವರ್ ಸಬ್‌ಸ್ಟೇಷನ್‌ಗಳು

10) ಕಮ್ಯುನಿಕೇಷನ್ಸ್ ಪೋಸ್ಟ್ ಮತ್ತು

11) ಗೃಹ ಮಂತ್ರಾಲಯವು ಗುರ್ತಿಸುವ ಸೂಕ್ಷ್ಮ ಪ್ರದೇಶಗಳಲ್ಲಿರುವ ಪೊಲೀಸ್ ಸ್ಟೇಷನ್‌ಗಳು/ ಔಟ್‌ಪೋಸ್ಟ್‌ಗಳು/ಬಾರ್ಡರ್ ಔಟ್‌ಪೋಸ್ಟ್‌ಗಳು ವಾಚ್ ಟವರಗಳಂತಹ ಪೊಲೀಸ್ ಎಸ್ಟಾಬ್ಲಿಷ್‌ಮೆಂಟ್‌ಗಳು.

138(355) ಶ್ರೀ ಕೆ.ಜಿ. ಬೋಪಯ್ಯ (ಮಡಿಕೇರಿ): ಮಾನ್ಯ ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಡಿಕೇರಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಗೆ ಒಳಪಟ್ಟಂತಿರುವ ಬ್ರಹ್ಮಗಿರಿಯಿಂದ ಪುಷ್ಪಗಿರಿವರೆಗಿನ ಪ್ರದೇಶದಲ್ಲಿ ರಾಷ್ಟ್ರೀಯ ಉದ್ಯಾನವನ ನಿರ್ಮಿಸುವ ಯೋಜನೆ ಸರ್ಕಾರದ ಮುಂದೆ ಇದೆಯೇ (ವಿವರ ನೀಡುವುದು).

ಆ) ಈ ರಾಷ್ಟ್ರೀಯ ಉದ್ಯಾನವನ ನಿರ್ಮಿಸುವ ಯೋಜನೆಗೆ ಸ್ಥಳೀಯರ ವಿರೋಧ ಇದೆ ಎಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರದ ನಿಲುವೇನು?

ಶ್ರೀ ಸಿ ಚೆನ್ನಿಗಪ್ಪ (ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು):

ಅ) ಇರುವುದಿಲ್ಲ.

ಆ) ಉದ್ಯಾನವನ್ನು ನಿರ್ಮಿಸುವ ಬಗ್ಗೆ ದಿನಾಂಕ: 28–8–2003 ರಂದು ಕೊಡಗು ಜಿಲ್ಲಾ ಪಂಚಾಯತ್ ಸಾಮಾನ್ಯ ಸಭೆಯಲ್ಲಿ ವಿರೋಧವನ್ನು ವ್ಯಕ್ತಪಡಿಸಿ ನಿರ್ಣಯ ಕೈಗೊಂಡಿರುತ್ತಾರೆ ಎಂದು ತಿಳಿದು ಬಂದಿದೆ.

ಇ) ಉದ್ಯಾನವನ ನಿರ್ಮಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಈಗ ಇಲ್ಲದಿರುವುದರಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ.

136(356) ಶ್ರೀ ಬೋಪಯ್ಯ ಕೆ.ಜಿ. (ಮಡಿಕೇರಿ): ಮಾನ್ಯ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೊಡಗು ಜಿಲ್ಲೆಯಲ್ಲಿ ಜಮ್ಮ ಮತ್ತು ಇತರ ಭೂ ಹಿಡುವಳಿದಾರರಿಗೆ ಆ ಜಾಗದಲ್ಲಿ ಮರದ ಮಾಲೀಕತ್ವ ನೀಡುವುದಾಗಿ ಸರ್ಕಾರ ನೀಡಿರುವ ಆಶ್ವಾಸನೆಯು ಗಮನದಲ್ಲಿ ಇದೆಯೇ;

ಆ) ಹಾಗಿದ್ದಲ್ಲಿ, ಇದುವರೆವಿಗೂ ಭೂ ಹಿಡುವಳಿದಾರರಿಗೆ ಮರದ ಮಾಲೀಕತ್ವ ನೀಡದೆ ಇರಲು ಕಾರಣವೇನು;